**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 76/2020**

**ಚಾ.ಸಾ. :- 04**
**ಪ್ರಾ.ಸಾ. :- 03**

| | |
|---|---|
| ಹೆಸರು | : ಚಂದ್ರ |
| ತಂದೆಯ ಹೆಸರು | : ಮಾಣಿಕ್ಯಂ |
| ವಯಸ್ಸು | : 40 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಡಣಾಯಕನಪುರ ಗ್ರಾಮ. |

**ಪ್ರಮಾಣೀಕರಿಸಲಾದ ದಿನಾಂಕಃ- 23.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಅಪಘಾತ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ.

ಈಗ ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳು ಸ್ಥಳದಲ್ಲಿದ್ದವು.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ನನಗೆ ಕನ್ನಡ ಓದಲು, ಬರೆಯಲು ಬರುವುದಿಲ್ಲ. ಪೊಲೀಸರು ಮಹಜರ್ ಗೆ ಬರಬೇಕೆಂದು ನೋಟೀಸ್ ಕೊಟ್ಟಿಲ್ಲ. ಒಂದು ಮಹಜರಿಗೆ ಚಾ.ಸಾ-3 ರವರ ಜೊತೆ ಅಪಘಾತ ಸ್ಥಳದ ಬಳಿ ಸಹಿ ಮಾಡಿರುತ್ತೇನೆ. ಮಹಜರ್ ಗಳಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಬೆಳಿಗ್ಗೆ ಸುಮಾರು 8.00 ಗಂಟೆ ಸಮಯದಲ್ಲಿ ಸ್ಥಳಕ್ಕೆ ಹೋಗಿದ್ದವು. ನಾನು ಪೊಲೀಸ್ ಠಾಣೆಯಲ್ಲೂ ಸಹ ಒಂದು ಸಹಿ ಮಾಡಿರುತ್ತೇನೆ.

ಫೋಟೋಗಳಲ್ಲಿ ನನ್ನ ಮತ್ತು ಚಾ.ಸಾ-3 ರವರ ಭಾವಚಿತ್ರ ಇವೆ. ಲಾರಿಗೆ ಮತ್ತು ದ್ವಿಚಕ್ರ ವಾಹನಕ್ಕೆ ಏನೇನು ಜಖಂ ಆಗಿರುತ್ತದೆ ಹಾಗೂ ಅವುಗಳ ಬಗ್ಗೆ ಮಹಜರ್ ನಲ್ಲಿ ಬರೆದಿರುತ್ತಾರೋ, ಇಲ್ಲವೋ ಎನ್ನುವುದರ ಬಗ್ಗೆ ನನಗೆ ಗೊತ್ತಿಲ್ಲ. ಚಾ.ಸಾ-1 ನನಗೆ ಗೊತ್ತಿಲ್ಲ. ಮೃತರ ಮತ್ತು ಗಾಯಾಳುವಿನ ಕುಟುಂಬಕ್ಕೆ ಪರಿಹಾರ ಸಿಗಲೆಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ : ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**